# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 982 |
| ಸದಸ್ಯರ ಹೆಸರು | : | ಶ್ರೀ. ಪ್ರತಾಪ್‌ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |
| ಉತ್ತರಿಸುವ ದಿನಾಂಕ | : | 24.02.2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಡಿಕೆ ತೋಟಗಳಲ್ಲಿ ಹಬ್ಬಿರುವ ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯಿಂದಾಗಿ ಅಡಿಕೆ ಬೆಳೆಗಾರರು ಅತೀವ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಬಂದಿದ್ದಲ್ಲಿ, ಸದರಿ ಎಲೆಚುಕ್ಕಿ ಮತ್ತು ಹಳದಿ ರೋಗದಿಂದ ಎಷ್ಟು ವಿಸ್ತೀರ್ಣದ ಅಡಿಕೆ ತೋಟ ಇದುವರೆವಿಗೆ ಹಾನಿಗೀಡಾಗಿದೆ: (ಜಿಲ್ಲಾವಾರು ವಿವರ ನೀಡುವುದು) | ಅಡಿಕೆ ಎಲ ಚುಕ್ಕೆ ರೋಗದಿಂದ ಹಾನಿಗೊಳಗಾದ ಪ್ರದೇಶ (see table 1 below); ಅಡಿಕೆ ಹಳದಿ ಎಲ ರೋಗದಿಂದ ಹಾನಿಗೊಳಗಾದ ಪ್ರದೇಶ (see table 2 below) |
| ಇ) | ಸದರಿ ಎಲೆಚುಕ್ಕಿ ಮತ್ತು ಹಳದಿ ರೋಗ ಬಾಧೆಯನ್ನು ವೈಜ್ಞಾನಿಕವಾಗಿ ನಿಯಂತ್ರಿಸಲು ಮತ್ತು ಹಾನಿಗೀಡಾಗಿರುವ ಅಡಿಕೆ ತೋಟಗಳ ಪುನಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ | ಸರ್ಕಾರ ಕೈಗೊಂಡಿರುವ ಕ್ರಮಗಳು ಈ ಕೆಳಗಿನಂತಿವೆ.<br>1) ರೋಗದ ನಿಯಂತ್ರಣ ಕುರಿತು ತಜ್ಞರು ಹಾಗೂ ಅಧಿಕಾರಿಗಳ ಸಹಯೋಗದೊಂದಿಗೆ 138 ತರಬೇತಿ ಹಾಗೂ ಕಾರ್ಯಾಗಾರಗಳ ಮೂಲಕ |

ಅಡಿಕೆ ಎಲ ಚುಕ್ಕೆ ರೋಗದಿಂದ ಹಾನಿಗೊಳಗಾದ ಪ್ರದೇಶ

| **ಜಿಲ್ಲೆಗಳು** | **ಅಡಿಕೆ ಎಲ ಚುಕ್ಕೆ ರೋಗಕ್ಕೆ ಹಾನಿಗೊಳಗಾದ ಪ್ರದೇಶ (ಹೆಕ್ಟೇರ್‌ಗಳಲ್ಲಿ)** |
|---|---|
| ಚಿಕ್ಕಮಗಳೂರು | 20000.00 |
| ಶಿವಮೊಗ್ಗ | 12500.00 |
| ಉತ್ತರ ಕನ್ನಡ | 4044.00 |
| ಹಾಸನ | 4200.00 |
| ದಕ್ಷಿಣ ಕನ್ನಡ | 1100.00 |
| ಉಡುಪಿ | 160.00 |
| ಕೊಡಗು | 500.00 |
| ಒಟ್ಟು | 42504.00 |

ಅಡಿಕೆ ಹಳದಿ ಎಲ ರೋಗದಿಂದ ಹಾನಿಗೊಳಗಾದ ಪ್ರದೇಶ

| **ಜಿಲ್ಲೆಗಳು** | **ಅಡಿಕೆ ಹಳದಿ ಎಲ ರೋಗದಿಂದ ಹಾನಿಗೊಳಗಾದ ಪ್ರದೇಶ (ಹೆಕ್ಟೇರ್‌ಗಳಲ್ಲಿ)** |
|---|---|
| ಚಿಕ್ಕಮಗಳೂರು | 9625.00 |
| ದಕ್ಷಿಣ ಕನ್ನಡ | 2000.00 |
| ಕೊಡಗು | 2200.00 |
| ಒಟ್ಟು | 13825.00 |

| | | |
|---|---|---|
| | ತತ್ ಕ್ಷಣದ ಕ್ರಮಗಳೇನು: | ರೈತರಿಗೆ ಅರಿವು ಮೂಡಿಸಲಾಗಿದೆ.<br>2) ಅಡಿಕೆ ಎಲೆಚುಕ್ಕೆ ರೋಗ ಮತ್ತು ಅಡಿಕೆ ಬೆಳೆಗೆ ತಗಲುವ ಹಳದಿ ಎಲೆ ರೋಗ ಇನ್ನಿತರೆ ಸಮಸ್ಯೆಗಳಿಗೆ ಶಾಶ್ವತ ಪರಿಹಾರವನ್ನು ಕೈಗೊಳ್ಳಲು ಶೃಂಗೇರಿಯಲ್ಲಿ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಅಡಿಕೆ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಸಂಶೋಧನೆ ಪ್ರಗತಿಯಲ್ಲಿದೆ.<br>3) ಕೇಂದ್ರ ಸರ್ಕಾರ ನೇಮಿಸಿರುವ ವೈಜ್ಞಾನಿಕ ತಂಡವು ದಿನಾಂಕ: 20 ರಿಂದ 22 ನವೆಂಬರ್-2022ರಲ್ಲಿ ಎಲೆಚುಕ್ಕೆ ರೋಗ ಬಾಧಿತವಾದ ಜಿಲ್ಲೆಗಳಾದ ಶಿವಮೊಗ್ಗ, ದಕ್ಷಿಣ ಕನ್ನಡ ಜಿಲ್ಲೆ ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ಭೇಟಿ ನೀಡಿರುತ್ತದೆ.<br>4) ದಿನಾಂಕ: 04-01-2023 ರಂದು ಶೃಂಗೇರಿಯಲ್ಲಿ ಅಡಿಕೆ ಬೆಳೆ ಕುರಿತಾದ ಸಮಸ್ಯೆಗಳಿಗೆ ವೈಜ್ಞಾನಿಕ ಪರಿಹಾರವನ್ನು ಕಂಡುಕೊಳ್ಳಲು ಒಂದು ದಿನದ Brain Storming Session ಏರ್ಪಡಿಸಲಾಗಿದ್ದು, ವಿಜ್ಞಾನಿಗಳು, ರೈತರು ಮತ್ತು ಅಧಿಕಾರಿಗಳು ಭಾಗವಹಿಸಿರುತ್ತಾರೆ.<br>5) ಜನವರಿ- 2023ರ ಮಾಹೆಯಲ್ಲಿ ಕೇಂದ್ರ ಸರ್ಕಾರದ ವತಿಯಿಂದ ವಿಜ್ಞಾನಿಗಳ ತಂಡವು ರಾಜ್ಯದ ಅಡಿಕೆ ಎಲೆಚುಕ್ಕೆ ರೋಗ ಬಾಧಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಹಾರೋಪಾಯಗಳನ್ನು ಶಿಫಾರಸ್ಸು ಮಾಡಿರುತ್ತಾರೆ. |
| ಈ) | ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯಿಂದಾಗಿ ಸಂಕಷ್ಟಕ್ಕೀಡಾಗಿರುವ ಅಡಿಕೆ ಬೆಳೆಗಾರರಿಗೆ ಸರ್ಕಾರ ಇದುವರೆಗೆ ನೀಡಿರುವ ಪರಿಹಾರದ ಮೊತ್ತವೆಷ್ಟು? (ವಿವರ ನೀಡುವುದು) | ಸರ್ಕಾರ ಇದುವರೆಗೂ ನೀಡಿರುವ ಸಹಾಯಧನದ ವಿವರ ಈ ಕೆಳಗಿನಂತಿವೆ.<br>1) ಅಡಿಕೆ ಎಲೆಚುಕ್ಕೆ ರೋಗ ಭಾದಿತ ರೈತರಿಗೆ ಉಚಿತವಾಗಿ ಪ್ರತಿ ಹೆಕ್ಟೇರ್‌ಗೆ ರೂ.4000.00 ಗಳಂತೆ ರೂ. 200.00 ಲಕ್ಷಗಳ ವೆಚ್ಚದಲ್ಲಿ ಸಸ್ಯ ಸಂರಕ್ಷಣಾ ಔಷಧಿಗಳನ್ನು 17264 ರೈತರಿಗೆ ವಿತರಿಸಲಾಗಿದೆ.<br>2) ಅಡಿಕೆ ಬೆಳೆಯ, ಹಳದಿ ಎಲೆ ರೋಗ ನಿಯಂತ್ರಣಕ್ಕಾಗಿ ಪರ್ಯಾಯ ತೋಟಗಾರಿಕೆ ಬೆಳೆಗಳಾದ ಕೋಕೋ, ಕಾಳಮೆಣಸು, ತಾಳೆ ಬೆಳೆ, ಕಾಫಿ, ಬಾಳೆ, ತೆಂಗು, ಜಾಯಿಕಾಯಿ, ಬೆಣ್ಣೆಹಣ್ಣು ಇತ್ಯಾದಿ ಬೆಳೆಗಳನ್ನು ಬೆಳೆಯಲು ಪ್ರತಿ ಹೆಕ್ಟೇರ್‌ಗೆ ರೂ.15,000/-ಗಳಂತೆ ಗರಿಷ್ಟ 2 ಹೆಕ್ಟೇರ್‌ಗಳವರೆಗೆ ಪ್ರೋತ್ಸಾಹಧನ |

| | | |
|---|---|---|
| | | ನೀಡಲಾಗುತ್ತಿದ್ದು, ಈವರೆಗೂ 2491 ಹೆಕ್ಟೇರ್ ಪ್ರದೇಶ ವಿಸ್ತೀರ್ಣಕ್ಕೆ ರೂ. 374.00ಲಕ್ಷಗಳ ವೆಚ್ಚ ಭರಿಸಲಾಗಿದೆ.<br>3) ಅಡಿಕೆ ಎಲೆಚುಕ್ಕೆ ಮತ್ತು ಹಳದಿ ಎಲೆ ರೋಗ ನಿಯಂತ್ರಣಕ್ಕಾಗಿ ಹೆಚ್ಚಿನ ಸಂಶೋಧನೆಗಾಗಿ ರೂ. 50.00 ಲಕ್ಷಗಳನ್ನು, ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ಜಿಲ್ಲೆಗೆ ಒದಗಿಸಲಾಗಿದೆ.<br>4) ಅಡಿಕೆ ಬೆಳೆ ಸೇರಿದಂತೆ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ ಹಾನಿ ಉಂಟಾದ ಸಂದರ್ಭದಲ್ಲಿ NDRF /SDRF ಮಾರ್ಗಸೂಚಿಗಳನ್ವಯ ಕಂದಾಯ ಇಲಾಖೆಯ ಮೂಲಕ ಬಹುವಾರ್ಷಿಕ ತೋಟಗಾರಿಕೆ ಬೆಳೆಗಳಿಗೆ ಪ್ರತಿ ಹೆಕ್ಟೇರ್‌ಗೆ ರೂ.28,000/-ಗಳಂತೆ 2 ಹೆಕ್ಟೇರ್‌ಗಳಿಗೆ ಪರಿಹಾರ ನೀಡಲಾಗುತ್ತಿದೆ.<br>5) ಕೇಂದ್ರ ತಜ್ಞರ ತಂಡದ ಶಿಫಾರಸ್ಸಿನಂತೆ ಅಡಿಕೆ ಎಲೆ ಚುಕ್ಕೆ ಮತ್ತು ಹಳದಿ ಎಲೆ ರೋಗ ನಿಯಂತ್ರಣ ಹಾಗೂ ಸಂಶೋಧನೆಗಾಗಿ CPCRI, ಕೊಚ್ಚಿ ರವರ ಮೂಲಕ ಕೇಂದ್ರ ಸರ್ಕಾರಕ್ಕೆ ರೂ. 197.66 ಕೋಟಿಗಳ ಪ್ರಸ್ತಾವನೆ ಸಲ್ಲಿಸಲಾಗಿದೆ ಹಾಗೂ ರೂ. 22.73 ಕೋಟಿಗಳ ಪ್ರಸ್ತಾವನೆಯು ರಾಜ್ಯ ಸರ್ಕಾರದ ಪರಿಶೀಲನೆಯಲ್ಲಿದೆ. |

**HORTI 111 HGM 2023**

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು